# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 27 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್ |
| ಉತ್ತರಿಸುವ ದಿನಾಂಕ | : | 04.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆಗಳ ಸದಸ್ಯತ್ವಕ್ಕೆ ಚುನಾವಣೆಗಳು ಮುಕ್ತಾಯಗೊಂಡಿದ್ದು, ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಚುನಾವಣೆ ನಡೆಸದಿರುವ ಒಟ್ಟು ಸಂಸ್ಥೆಗಳು ಎಷ್ಟು; (ಬೆಂಗಳೂರು ಜಿಲ್ಲೆಯ ಸಂಪೂರ್ಣ ವಿವರ ನೀಡುವುದು)</td><td>ರಾಜ್ಯದ 55 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸದಸ್ಯತ್ವ ಚುನಾವಣೆ ನಡೆದಿದ್ದು, ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಚುನಾವಣೆ ನಡೆಸಬೇಕಾಗಿರುತ್ತದೆ.<br><br>ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿನ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಚುನಾವಣೆಗೆ ಸಂಬಂಧಿಸಿದಂತೆ ಸಂಪೂರ್ಣ ವಿವರ ಈ ಕೆಳಕಂಡಂತೆ ಇರುತ್ತದೆ:<br><br><u>ಬೆಂಗಳೂರು ನಗರ ಜಿಲ್ಲೆ:</u><br>1. ಹೆಬ್ಬಗೋಡಿ ನಗರಸಭೆ; ಆನೇಕಲ್, ಚಂದಾಪುರ ಮತ್ತು ಜಿಗಣಿ ಪುರಸಭೆಗಳಿಗೆ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆ ನಡೆದಿರುವುದಿಲ್ಲ.<br>2. ಅತ್ತಿಬೆಲೆ ಮತ್ತು ಬೊಮ್ಮಸಂದ್ರ ಪುರಸಭೆಗಳಲ್ಲಿ ಅಧ್ಯಕ್ಷ/ಉಪಾಧ್ಯಕ್ಷರ ಚುನಾವಣೆ ನಡೆದು ಕಾರ್ಯನಿರ್ವಹಿಸುತ್ತಿದ್ದಾರೆ.<br>3. ಮಾದನಾಯಕನಹಳ್ಳಿ ನಗರಸಭೆ, ಹುಣಸಮಾರನಹಳ್ಳಿ ಮತ್ತು ಚಿಕ್ಕಬಾಣಾವರ ಪುರಸಭೆಗಳು ಮೇಲ್ದರ್ಜೆಗೇರಿದ್ದು, ಸದಸ್ಯತ್ವಕ್ಕೆ ಚುನಾವಣೆ ನಡೆದಿರುವುದಿಲ್ಲ.<br><br><u>ಬೆಂಗಳೂರು ಗ್ರಾಮಾಂತರ ಜಿಲ್ಲೆ:</u><br>1. ಹೊಸಕೋಟೆ ನಗರಸಭೆ ಮತ್ತು ದೇವನಹಳ್ಳಿ ಪುರಸಭೆಗೆ ಅಧ್ಯಕ್ಷ/ಉಪಾಧ್ಯಕ್ಷರ ಚುನಾವಣೆ ನಡೆದಿರುವುದಿಲ್ಲ.<br>2. ದೊಡ್ಡಬಳ್ಳಾಪುರ ಮತ್ತು ನೆಲಮಂಗಲ ನಗರಸಭೆ ಮತ್ತು ವಿಜಯಪುರ ಪುರಸಭೆಗೆ ಅಧ್ಯಕ್ಷ/ಉಪಾಧ್ಯಕ್ಷ ಚುನಾವಣೆ ನಡೆಸಲಾಗಿದೆ.<br>3. ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಮೇಲ್ದರ್ಜೆಗೇರಿದ್ದು, ಸದಸ್ಯತ್ವಕ್ಕೆ ಚುನಾವಣೆ ನಡೆದಿರುವುದಿಲ್ಲ.</td></tr>
<tr><td>(ಆ)</td><td>ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ನಡೆಸದಿರಲು ಕಾರಣಗಳೇನು; (ವಿವರ ನೀಡುವುದು)</td><td>ಪ್ರಸ್ತುತ ಹಲವು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನದ 9ನೇ ಅವಧಿ ಮುಕ್ತಾಯಗೊಂಡಿದ್ದು, ರಾಜ್ಯವನ್ನು ಒಂದು ಘಟಕವನ್ನಾಗಿರಿಸಿಕೊಂಡು ಮೇಲ್ದರ್ಜೆಗೇರಿಸಿದ ಮತ್ತು ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ 10ನೇ ಅವಧಿಗೆ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನದ ಮೀಸಲಾತಿ ನಿಗಧಿಪಡಿಸಬೇಕಾಗಿರುತ್ತದೆ.</td></tr>
<tr><td>(ಇ)</td><td>ಯಾವ ಕಾಲಮಿತಿಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ ನಡೆಸಲಾಗುತ್ತದೆ?</td><td>ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ:-<br>1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು</td></tr>
</table>

| | | |
|---|---|---|
| | | ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ: 17.12.2021ರ ಆದೇಶದಲ್ಲಿ ಪ್ರಸ್ತುತ ನಿಗದಿಪಡಿಸುತ್ತಿರುವ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಮುಂದಿನ ಆದೇಶದವರೆಗೆ ನಿಗದಿಪಡಿಸದೇ ಸಂವಿಧಾನದ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ನಿಗದಿಪಡಿಸಿ, ಉಳಿದ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಬೇಕಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ. ಈ ಆದೇಶದ ಮೇರೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಹಿಂದುಳಿದ ವರ್ಗಗಳಿಗೆ ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಲು ಸ್ವತಂತ್ರವಾದ ಮತ್ತು ಸಮರ್ಪಿತವಾದ ಆಯೋಗವನ್ನು ರಚಿಸಿ ಆದೇಶಿಸಿರುತ್ತದೆ. ಸದರಿ ಆಯೋಗವು ನೀಡಿರುವ ಶಿಫಾರಸ್ಸನ್ನು ಸಚಿವ ಸಂಪುಟವು ಅನುಮೋದಿಸಿರುತ್ತದೆ. ಸದರಿ ಶಿಫಾರಸ್ಸನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ಆಯೋಗದಿಂದ ಪ್ರಾಯೋಗಿಕ ದತ್ತಾಂಶ (Empirical data) ವರದಿಯನ್ನು ಪಡೆಯುವಂತೆ ಆದೇಶಿಸಿರುತ್ತದೆ. ಪ್ರಸ್ತುತ ಆಯೋಗವು ಪೂರಕ ವರದಿಯನ್ನು ನೀಡಿದ್ದು, ಈ ವರದಿಯನ್ನು ಪರಿಶೀಲಿಸಲಾಗುತ್ತಿದೆ.<br><br>2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿದೆ. ಪ್ರಕರಣವು ದಿನಾಂಕ:12.07.2023 ರಂದು ವಿಚಾರಣೆಗೆ ಬರಲಿದೆ.<br><br>ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ ನ್ಯಾಯಾಲಯದ ಅಂತಿಮ ತೀರ್ಪಿನ ನಂತರ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ:** ನಅಇ 10 ಎಲ್‌ಸಿಕ್ಯೂ 2023

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು